# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2018-19ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ ಯೋಜನೆಯಡಿಯ (NMAET) Sub-Mission on Seeds and Planting Materials (SMSP) ಕಾರ್ಯಕ್ರಮದಡಿ ಪುನರ್ವಿನಿಯೋಗದ ಮೂಲಕ ಪಡೆಯಲಾದ ಅನುದಾನವನ್ನು ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ ಸಂಸ್ಥೆಗೆ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ: ಕೃಇ 149 ಕೃಉಇ 2017, ದಿನಾಂಕ: 23.07.2018.
2. ಸರ್ಕಾರದ ಆದೇಶ ಸಂಖ್ಯೆ: ಕೃಇ 66 ಕೃಉಇ 2018, ದಿನಾಂಕ: 06.12.2018
3. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 15-4/2017-SD-VI, ದಿನಾಂಕ: 22.02.2019.
4. ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರ ಸಂಖ್ಯೆ: FD 1 BGL 2018, ದಿನಾಂಕ: 13.12.2018.
5. ಕೃಷಿ ಆಯುಕ್ತರ ಪ್ರಸ್ತಾವನೆ ಸಂಖ್ಯೆ: SFS-4/SMSP/1/2018-19, ದಿನಾಂಕ: 31.01.2019.
6. ಸರ್ಕಾರದ ಆದೇಶ ಸಂಖ್ಯೆ: FD 200 BRS 2018, ದಿನಾಂಕ: 21.03.2019

<u>ಪ್ರಸ್ತಾವನೆ:</u>

2018-19ನೇ ಸಾಲಿನ ಆಯವ್ಯಯ ಸಂಪುಟ-3ರಲ್ಲಿ ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಲೆಕ್ಕ ಶೀರ್ಷಿಕೆ-2401-00-800-1-53 ಅಡಿ ಒಟ್ಟು ರೂ.8530.00 ಲಕ್ಷ ಅನುದಾನ ನಿಗದಿಪಡಿಸಲಾಗಿದ್ದು, ಪರಿಷ್ಕೃತ ಅಂದಾಜಿನಲ್ಲಿ ಹೆಚ್ಚುವರಿಯಾಗಿ ರೂ. 6987.95 ಲಕ್ಷ ಅನುದಾನವನ್ನು ಒದಗಿಸಲಾಗಿರುತ್ತದೆ.

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ, ಕೇಂದ್ರ ಪುರಸ್ಕೃತ ಯೋಜನೆ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET)ಯಡಿಯ ಉಪ ಯೋಜನೆ Sub-Mission on Seeds and Planting Materials (SMSP) ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ, 2017-18ನೇ ಸಾಲಿನ ಮರುಮೌಲ್ಯೀಕೃತ ಕೇಂದ್ರದ ಪಾಲಿನ ಅನುದಾನ ರೂ. 840.00 ಲಕ್ಷಗಳ ಪೈಕಿ (ಶೇ.100ರಷ್ಟು ಕೇಂದ್ರದ ಪಾಲಿನಂತೆ) ಆಯವ್ಯಯದಲ್ಲಿ ಲಭ್ಯವಿದ್ದ ಅನುದಾನ ರೂ. 500.00 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (2)ರ ಸರ್ಕಾರದ ಆದೇಶದಲ್ಲಿ, 2018-19ನೇ ಸಾಲಿನ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯ ಲೆಕ್ಕ ಶೀರ್ಷಿಕೆ: 2401-00-800-1-57ರ ಉಪ ಶೀರ್ಷಿಕೆ: 059 (ಇತರೆ ಖರ್ಚುಗಳು) ಅಡಿಯಿಂದ ರೂ. 342.47 ಲಕ್ಷಗಳನ್ನು, ಕೇಂದ್ರ ಪುರಸ್ಕೃತ ಯೋಜನೆ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET)ಯಡಿಯ ಉಪ ಯೋಜನೆ Sub-Mission on Seeds and Planting Materials (SMSP) ಕಾರ್ಯಕ್ರಮ ಅನುಷ್ಠಾನಕ್ಕೆ ಲೆಕ್ಕ ಶೀರ್ಷಿಕೆ: 2401-00-800-1-53ರ ಉಪ ಶೀರ್ಷಿಕೆ: 059ಗೆ ಪುನರ್ವಿನಿಯೋಗದ ಮೂಲಕ ಒದಗಿಸಿಕೊಂಡು ಬಿಡುಗಡೆ ಮಾಡಲಾಗಿದೆ.

ಮೇಲೆ ಓದಲಾದ (3)ರ ಕೇಂದ್ರ ಸರ್ಕಾರದ ಪತ್ರದಲ್ಲಿ, ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET) ಯೋಜನೆಯಡಿಯ Sub-Mission on Seeds and Planting Materials (SMSP) ಕಾರ್ಯಕ್ರಮಕ್ಕೆ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ 6 ಬೀಜ ಸಂಸ್ಕರಣೆ ಮತ್ತು ಶೇಖರಣಾ ಗೋದಾಮು ಘಟಕ ಸ್ಥಾಪಿಸಲು ರೂ. 360.00 ಲಕ್ಷಗಳನ್ನು (ಶೇ. 100ರಷ್ಟು ಕೇಂದ್ರದ ಪಾಲಿನಂತೆ) ಬಿಡುಗಡೆ ಮಾಡಿರುತ್ತದೆ.

ಸದರಿ ಕೇಂದ್ರ ಸರ್ಕಾರದ ಅನುದಾನ ರೂ. 360.00 ಲಕ್ಷಗಳು ರಾಜ್ಯದ ಬೊಕ್ಕಸಕ್ಕೆ ಜಮೆಯಾದ ಕುರಿತು ಮೇಲೆ ಓದಲಾದ (4)ರ ಆರ್ಥಿಕ ಇಲಾಖೆಯ ಜಮಾ ದೃಢೀಕರಣ ಪತ್ರದಲ್ಲಿ ದೃಢೀಕರಿಸಲಾಗಿರುತ್ತದೆ.

ಮೇಲೆ ಓದಲಾದ (5)ರ ಕೃಷಿ ಆಯುಕ್ತರ ಪ್ರಸ್ತಾವನೆಯಲ್ಲಿ, 2017-18ನೇ ಸಾಲಿನಲ್ಲಿ ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET)ಯಡಿಯ Sub-Mission on Seeds and Planting Materials (SMSP) ಕಾರ್ಯಕ್ರಮದಡಿ ಗ್ರಾಮ ಪಂಚಾಯ್ತಿ ಮಟ್ಟದಲ್ಲಿ 6 ಬೀಜ ಸಂಸ್ಕರಣೆ ಮತ್ತು ಶೇಖರಣಾ ಗೋದಾಮು ಘಟಕ ಸ್ಥಾಪಿಸಲು, ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗಿರುವ ರೂ. 360.00 ಲಕ್ಷಗಳ (ಶೇ. 100ರಷ್ಟು) ಅನುದಾನವನ್ನು 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53-059ರಡಿ ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ ಸಂಸ್ಥೆಗೆ ಬಿಡುಗಡೆ ಮಾಡಲು ಕೋರಲಾಗಿದೆ.

ಮೇಲೆ ಓದಲಾದ (6)ರ ಸರ್ಕಾರದ ಆದೇಶದಲ್ಲಿ, ಆರ್ಥಿಕ ಇಲಾಖೆಯು 2018-19ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಕರ್ನಾಟಕ ರಾಜ್ಯ ಬೀಜ ನಿಗಮಕ್ಕೆ NMAET- SMSP ಕಾರ್ಯಕ್ರಮದಡಿ ಗ್ರಾಮ ಪಂಚಾಯಿತಿ ಮಟ್ಟದಲ್ಲಿ 6 ಬೀಜ ಸಂಸ್ಕರಣೆ ಮತ್ತು ಶೇಖರಣಾ ಗೋದಾಮು ಘಟಕ ಸ್ಥಾಪಿಸಲು ಕೇಂದ್ರ ಸರ್ಕಾರದ ಶೇ. 100 ರಷ್ಟು ಪಾಲು ರೂ. 360.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ: 2401-00-800-1-57-059 ಅಡಿಯಿಂದ ಲೆಕ್ಕ ಶೀರ್ಷಿಕೆ: 2401-00-800-1-53-059ರಡಿ ಪುನರ್ವಿನಿಯೋಗದ ಮೂಲಕ ಒದಗಿಸಿ ಮಂಜೂರಾತಿ ನೀಡಿದೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ್ದು, ಪ್ರಸ್ತುತ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-53-059ರಡಿ ಪುನರ್ವಿನಿಯೋಗದ ಮೂಲಕ ಲಭ್ಯವಾದ ಅನುದಾನವನ್ನು ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ, ಬೆಂಗಳೂರು ಸಂಸ್ಥೆಗೆ ಬಿಡುಗಡೆ ಮಾಡುವ ಸಲುವಾಗಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 66 ಕೃಉಇ 2018, ಬೆಂಗಳೂರು, ದಿನಾಂಕ: 25.03.2019.**

2018-19ನೇ ಸಾಲಿಗೆ ಸಂಬಂಧಿಸಿದಂತೆ, ಕೇಂದ್ರ ಪುರಸ್ಕೃತ ಕೃಷಿ ವಿಸ್ತರಣೆ ಮತ್ತು ತಂತ್ರಜ್ಞಾನ ಅಭಿಯಾನ ಮತ್ತು ತರಬೇತಿ (NMAET)ಯಡಿಯ Sub-Mission on Seeds and Planting Materials (SMSP) ಕಾರ್ಯಕ್ರಮದಡಿ, ಗ್ರಾಮ ಪಂಚಾಯಿತಿ ಮಟ್ಟದಲ್ಲಿ 6 ಬೀಜ ಸಂಸ್ಕರಣೆ ಮತ್ತು ಶೇಖರಣಾ ಗೋದಾಮು ಘಟಕ ಸ್ಥಾಪಿಸಲು ಕೇಂದ್ರ ಸರ್ಕಾರದ ಶೇ. 100 ರಷ್ಟು ಪಾಲು **ರೂ. 360.00 ಲಕ್ಷಗಳನ್ನು (ಮೂರು ನೂರ ಅರವತ್ತು ಲಕ್ಷ ರೂಪಾಯಿಗಳು ಮಾತ್ರ)** 2018-19ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 2401-00-800-1-57-059 ಅಡಿಯಿಂದ ಲೆಕ್ಕ ಶೀರ್ಷಿಕೆ: 2401-00-800-1-53-059ಕ್ಕೆ ಪುನರ್ವಿನಿಯೋಗದ ಮೂಲಕ ಲಭ್ಯವಾದ ಅನುದಾನವನ್ನು ಬಿಡುಗಡೆ ಮಾಡಿದೆ.

ಸದರಿ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕೃಷಿ ಇಲಾಖೆಯು ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ ಸಂಸ್ಥೆಯ CCO ಗೆ ಪಾವತಿಸಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ. ಮುಂದುವರೆದು, ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತವು ಸಲ್ಲಿಸುವ ಬಿಲ್ಲುಗಳಿಗೆ ಆಯುಕ್ತರು, ಕೃಷಿ ಇಲಾಖೆರವರು ಮೇಲು ರುಜು ಮಾಡಲು ಅನುಮೋದಿಸಿದೆ.

ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ ಸಂಸ್ಥೆಯು ಕೇಂದ್ರ ಸರ್ಕಾರವು ಆಗಿಂದ್ದಾಗ್ಗೆ ಹೊರಡಿಸುವ ಮಾರ್ಗಸೂಚಿ ಅನುಸಾರ ಯೋಜನೆಯನ್ನು ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 253 ವೆಚ್ಚ-4/2019, ದಿನಾಂಕ: 23.03.2019 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnam

(ಬಿ.ಎಸ್. ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

25/03/19

ಇವರಿಗೆ:-

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (A&E), ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಕೃಷಿ ಆಯುಕ್ತರು,/ಕೃಷಿ ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಬೀಜ ನಿಗಮ ನಿಯಮಿತ, ಹೆಬ್ಬಾಳ, ಬೆಂಗಳೂರು.
8. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
9. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
10. ನಿರ್ದೇಶಕರು, TNMC, ಖನಿಜ ಭವನ ಬೆಂಗಳೂರು.
11. ಸರ್ಕಾರದ ಅಧೀನ ಕಾರ್ಯದರ್ಶಿ (FR & CC), ಆರ್ಥಿಕ ಇಲಾಖೆ, ಬೆಂಗಳೂರು.
12. ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ- 4&5), ಆರ್ಥಿಕ ಇಲಾಖೆ, ಬೆಂಗಳೂರು
13. ಆಂತರಿಕ ಆರ್ಥಿಕ ಸಲಹೆಗಾರರು ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು
14. ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.